# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 487**

**ಸದಸ್ಯರ ಹೆಸರು : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ)**

**ಉತ್ತರಿಸಬೇಕಾದ ದಿನಾಂಕ : 10-03-2025**

**ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು**

| ಪ್ರಶ್ನೆ | ಉತ್ತರ |
|---|---|
| (ಅ) ಸರ್ಕಾರಿ ಸಿಬ್ಬಂದಿಗಳಿಗೆ ಸೂಕ್ತ ಸಮಯದಲ್ಲಿ ವೇತನ ಪಾವತಿಯಾಗಲಿ ಎಂದು ಕೆ-2 ಮಾದರಿಗೆ ಒಳಪಡಿಸಿದ್ದರೂ ಕೂಡ ಹಲವಾರು ವರ್ಷಗಳಿಂದ ಶಾಲಾ ಶಿಕ್ಷಕರುಗಳು ಹಾಗೂ ಇತರೆ ಸಿಬ್ಬಂದಿಗಳಿಗೆ ನೀಡಬೇಕಾದ ವೇತನ ಪಾವತಿಯು 3-4 ತಿಂಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಶಾಲೆಗಳ ಶಿಕ್ಷಕರು ಮತ್ತು ಸಿಬ್ಬಂದಿಗಳಿಗೆ ಪ್ರತಿ ಮಾಹೆ ವೇತನ ಪಾವತಿಯಾಗುತ್ತಿರುವುದರಿಂದ, ಸದರಿ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಆ) ಸರ್ಕಾರವು 4 ತಿಂಗಳಿಗೊಮ್ಮೆ ಅನುದಾನ ಬಿಡುಗಡೆ ಮಾಡಿ ವೇತನ ಪಾವತಿ ಮಾಡುತ್ತಿರುವುದರಿಂದ ಶಿಕ್ಷಕರು ಹಾಗೂ ಸಿಬ್ಬಂದಿಗಳು ಮಾಸಿಕ ವಿಮಾ ಕಂತುಗಳ ಸಮಸ್ಯೆ ಕೆ.ಜಿ.ಐ.ಡಿ ಮೇಲೆ ವಿಧಿಸುವ ಬಡ್ಡಿ ಭರಿಸಲು ಹಾಗೂ ಕುಟುಂಬ ನಿರ್ವಹಣೆ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರತಿ ತ್ರೈಮಾಸಿಕ ಅವಧಿಯ ಪ್ರಾರಂಭದಲ್ಲಿಯೇ ವೇತನ ವೆಚ್ಚಕ್ಕಾಗಿ ಅನುದಾನವನ್ನು ಮುಂಗಡವಾಗಿ ಬಿಡುಗಡೆ ಮಾಡುತ್ತಿರುವುದರಿಂದ, ವಿಳಂಬವಾಗಿ ಪಾವತಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಇ) ಸರ್ಕಾರವು 4 ತಿಂಗಳಿಗೊಮ್ಮೆ ಅನುದಾನ ಬಿಡುಗಡೆ ಮಾಡುವ ಬದಲು ವಾರ್ಷಿಕ ವೇತನ ಬಜೆಟ್ ಅನ್ನು ಬಿಡುಗಡೆ ಮಾಡದಿರಲು ಕಾರಣವೇನು; ವಾರ್ಷಿಕ ವೇತನ ಬಜೆಟ್ ಬಿಡುಗಡೆ ಮಾಡುವ ಆಲೋಚನೆ ಸರ್ಕಾರಕ್ಕೆ ಇದೆಯೇ? | ಪ್ರಸ್ತುತ ಅನುದಾನವನ್ನು ತ್ರೈಮಾಸಿಕವಾಗಿ ಬಿಡುಗಡೆಗೊಳಿಸಲಾಗುತ್ತಿದ್ದು, ವಾರ್ಷಿಕ ವೇತನ ಬಜೆಟ್ ಬಿಡುಗಡೆ ಮಾಡುವ ಆಲೋಚನೆ ಇರುವುದಿಲ್ಲ. |

ಇಪಿ 53 ಯೋಯೋಕ 2025

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು